- ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಲಿಯುತ್ತಿರುವ 13500 ಮಕ್ಕಳಿಗೆ 4.72 ಕೋಟಿಗಳ ವೆಚ್ಚದಲ್ಲಿ ಕರ್ನಾಟಕ ದರ್ಶನ ಪ್ರವಾಸ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯಿತಿಗಳ ಮೂಲಕ ಏರ್ಪಡಿಸಲಾಗಿದೆ. ಈ ಸೌಲಭ್ಯವನ್ನು ಎಲ್ಲಾ ವರ್ಗದ ಮಕ್ಕಳಿಗೂ ವಿಸ್ತರಿಸಲಾಗಿದೆ. ಈವರೆಗೆ 5850 ಮಕ್ಕಳಿಗೆ ಪ್ರವಾಸ ಪೂರ್ಣಗೊಳಿಸಲಾಗಿದೆ.

2014–15 ನೇ ಸಾಲಿನಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಯೋಜನೆಗಳು:

- 2014–15ನೇ ಸಾಲಿನಲ್ಲಿ ರಾಜ್ಯದ ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಲಭ್ಯಗಳಾದ, ಯಾತ್ರಿನಿವಾಸ/ಡಾರ್ಮಿಟರಿ ನಿರ್ಮಾಣ, ಕುಡಿಯುವ ನೀರು ಮತ್ತು ಶೌಚಾಲಯ ಸೌಲಭ್ಯ, ಸಂಪರ್ಕರಸ್ತೆ ಅಭಿವೃದ್ಧಿ, ಪ್ರವಾಸೋದ್ಯಮ ಪ್ರಚಾರ ಮತ್ತು ಉತ್ತೇಜನ, ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆ ಅಡಿ ಪ್ರವಾಸಿ ಟ್ಯಾಕ್ಸಿ ವಿತರಣೆ ಮುಂತಾದ ಅಭಿವೃದ್ಧಿ ಯೋಜನೆಗಳಿಗಾಗಿ ₹ 395.10 ಕೋಟಿಗಳ ಅನುದಾನ ಒದಗಿಸಿದ್ದು, ಇದರಲ್ಲಿ ₹ 229.09 ಕೋಟಿಗಳನ್ನು ಮುಂದುವರೆದ ಕಾಮಗಾರಿಗಳಿಗೆ ಬಳಸಿಕೊಳ್ಳಲಾಗುವುದು. ಉಳಿದ ₹ 113.28 ಕೋಟಿಗಳನ್ನು ನೂತನ ಕಾಮಗಾರಿಗಳ ಅಭಿವೃದ್ಧಿಗೆ ಬಳಸಿಕೊಳ್ಳಲಾಗುವುದು.
- ರಾಜ್ಯದಲ್ಲಿರುವ ಪ್ರವಾಸಿ ತಾಣಗಳಲ್ಲಿ ಸಮಗ್ರವಾಗಿ ಪ್ರವಾಸಿ ಸೌಲಭ್ಯಗಳನ್ನು ಕಲ್ಪಿಸಲು ಕರ್ನಾಟಕ ಪ್ರವಾಸೋದ್ಯಮ ಮೂಲಸೌಲಭ್ಯ ನಿಗಮ ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ.
- ನೂತನ ಪ್ರವಾಸೋದ್ಯಮ ನೀತಿ 2014–19 ಜಾರಿಗೊಳಿಸಲು ಕ್ರಮ ವಹಿಸಲಾಗುತ್ತಿದೆ.
- ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ ಮೂಲಸೌಕರ್ಯ ಕಾಯ್ದೆಯನ್ನು ಜಾರಿಗೊಳಿಸಲು ಕ್ರಮ ವಹಿಸಲಾಗುತ್ತಿದೆ.
- ರಾಜ್ಯದ 30 ಜಿಲ್ಲೆಗಳಿಗೆ ಒಬ್ಬರಂತೆ ಪ್ರವಾಸೋದ್ಯಮ ಸಮಾಲೋಚಕರನ್ನು ನೇಮಿಸಲು ಕ್ರಮ ವಹಿಸಲಾಗುತ್ತಿದೆ.

ಮಾತೃಭಾಷಾ ತೀರ್ಪು ಮರುಪರಿಶೀಲನೆ ಅರ್ಜಿ

1443(2327), ಡಾ: ಸುಧಾಕರ್ ಕೆ. (ಚಿಕ್ಕಬಳ್ಳಾಪುರ)

ಅ) ಮಾತೃಭಾಷೆಯಲ್ಲೇ ಶಿಕ್ಷಣ ನೀಡಬೇಕೆಂಬುದು ಕಡ್ಡಾಯವಲ್ಲ ಎಂದು ಭಾರತದ ಸರ್ವೋಚ್ಚ ನ್ಯಾಯಾಲಯ ನೀಡಿರುವ ತೀರ್ಪಿನ ಮರು ಪರಿಶೀಲನಾ ಅರ್ಜಿಯನ್ನು ಸಲ್ಲಿಸಲಾಗಿದೆಯೇ;

ಆ) ಈ ತೀರ್ಪಿನ ಹಿನ್ನೆಲೆಯಲ್ಲಿ ಕನ್ನಡ ಭಾಷೆಗೆ ಧಕ್ಕೆ ಉಂಟಾಗುವ ಸಾಧ್ಯತೆ ಇದೆಯೇ, ಭಾಷಾ ಮಾಧ್ಯಮಕ್ಕೆ ಸಂಬಂಧಿಸಿ ಕರ್ನಾಟಕದ ಬೆಂಬಲಕ್ಕೆ ನಿಲ್ಲುವಂತೆ ಎಲ್ಲಾ ರಾಜ್ಯದ ಮುಖ್ಯಮಂತ್ರಿಗಳಿಗೆ ಪತ್ರ ಬರೆಯಲಾಗಿದೆಯೇ; ಹಾಗಿದ್ದಲ್ಲಿ ಯಾವ ಯಾವ ರಾಜ್ಯಗಳಿಂದ ಪ್ರತಿಕ್ರಿಯೆ ಬಂದಿದೆ;

ಇ) ತೀರ್ಪಿನ ಮರು ಪರಿಶೀಲನೆಗೆ ಮುನ್ನ ತಜ್ಞರನ್ನು ಸಂಪರ್ಕಿಸಿ ಚರ್ಚಿಸಲಾಗಿದೆಯೇ, ತಜ್ಞರು ನೀಡಿದ ಸಲಹೆಗಳೇನು;

ಈ) ತೀರ್ಪು ಮರು ಪರಿಶೀಲನೆ ಅರ್ಜಿ ಸಲ್ಲಿಸಿ ಅದರಲ್ಲಿ ಯಶಸ್ಸು ಸಿಕ್ಕರೆ ಮುಂದಿನ ನಿರ್ಧಾರ ಏನು; ಯಶಸ್ಸು ಸಿಗದಿದ್ದರೆ ಕೈಗೊಳ್ಳುವ ನಿರ್ಧಾರ ಯಾವುದು;

ಉ) ಮರು ಪರಿಶೀಲನಾ ಅರ್ಜಿ ಸಲ್ಲಿಕೆ ಬಿಟ್ಟರೆ ಸಧ್ಯಕ್ಕೆ ಬೇರೆ ಯಾವ ಪರ್ಯಾಯ ಮಾರ್ಗ ಇಲ್ಲವೇ?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು. ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ರಾಜ್ಯ ಸರ್ಕಾರವು ಮರು ಪರಿಶೀಲನಾ ಅರ್ಜಿ ಸಲ್ಲಿಸಿರುತ್ತದೆ.

ಆ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಹಿನ್ನೆಲೆಯಲ್ಲಿ ಕನ್ನಡ ಭಾಷೆಗೆ ಧಕ್ಕೆ ಉಂಟಾಗುವ ಸಾಧ್ಯತೆ ಇರುವುದರಿಂದ ಘನ ಸರ್ವೋಚ್ಚ ನ್ಯಾಯಾಲಯದಲ್ಲಿ ರಾಜ್ಯ ಸರ್ಕಾರವು ಮರು ಪರಿಶೀಲನಾ ಅರ್ಜಿ ಸಲ್ಲಿಸಿದೆ.

ಸರ್ವೋಚ್ಚ ನ್ಯಾಯಾಲಯದ ಸಂವಿಧಾನಾತ್ಮಕ ಪೀಠವು ದಿನಾಂಕ:06.05.2014ರಂದು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ತಳೆದಿರುವ ನಿಲುವನ್ನು ಬೆಂಬಲಿಸುವಂತೆ ಕೋರಿ ದಿನಾಂಕ:26.05.2014ರಂದು ಮಾನ್ಯ ಮುಖ್ಯಮಂತ್ರಿಯವರು ಎಲ್ಲಾ ರಾಜ್ಯದ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಮಾತೃಭಾಷೆ ಅನುಷ್ಠಾನಕ್ಕೆ ಸಹಕರಿಸುವಂತೆ ಕೋರಿರುತ್ತಾರೆ. ಈ ಪತ್ರಕ್ಕೆ ಅವರುಗಳಿಂದ ಪ್ರತಿಕ್ರಿಯೆಯನ್ನು ನಿರೀಕ್ಷಿಸಲಾಗುತ್ತಿದೆ.

ಮುಂದುವರಿದು, ದಿನಾಂಕ:03.06.2014ರಂದು ಮಾನ್ಯ ಮುಖ್ಯಮಂತ್ರಿಗಳು ಮಾನ್ಯ ಪ್ರಧಾನ ಮಂತ್ರಿಗಳಿಗೆ ಈ ವಿಷಯದಲ್ಲಿ ವಿವರವಾಗಿ ಪ್ರಸ್ತಾಪಿಸಿ, ಈ ಸಂಬಂಧ ಇತರೆ ರಾಜ್ಯಗಳ ಮುಖ್ಯಮಂತ್ರಿಗಳ ಸಭೆಯನ್ನು ಸನ್ಮಾನ್ಯ ಪ್ರಧಾನ ಮಂತ್ರಿಗಳ ಅಧ್ಯಕ್ಷತೆಯಲ್ಲಿ ಕರೆದು ಚರ್ಚಿಸುವಂತೆ ಕೋರಿರುತ್ತಾರೆ.

ಇ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನಾತ್ಮಕ ಪೀಠದ ತೀರ್ಪು ಹೊರಬಿದ್ದು ತಕ್ಷಣವೇ ದಿನಾಂಕ:09.05.2014ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆಯೊಂದನ್ನು ಕರೆಯಲಾಗಿದ್ದು ಈ ಸಭೆಯಲ್ಲಿ ನಾಡಿನ ಹೆಸರಾಂತ ಹಿರಿಯ ಸಾಹಿತಿಗಳು, ಗಣ್ಯರು, ಮಾನ್ಯ ಸಚಿವರುಗಳು, ಮಾಜಿ ಹಾಗೂ ಹಾಲಿ ಅಡ್ವೋಕೇಟ್ ಜನರಲ್ ರವರು, ಕನ್ನಡ ಸಾಹಿತ್ಯ ಪರಿಷತ್, ಕನ್ನಡ ಅಭಿವೃದ್ಧಿ ಪ್ರಾಧಿಕಾರಿಗಳ ಅಧ್ಯಕ್ಷರು, ಶಿಕ್ಷಣ ತಜ್ಞರುಗಳೊಂದಿಗೆ ಚರ್ಚಿಸಿ ಅವರುಗಳ ಅಭಿಪ್ರಾಯ/ಸಲಹೆಗಳನ್ನು ಪಡೆಯಲಾಯಿತು.

ದಿನಾಂಕ:20.5.2014ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ಮುಖ್ಯ ನ್ಯಾಯಾಧೀಶರ ಸಭೆ ಕರೆದು ಚರ್ಚಿಸಲಾಗಿದೆ. ಈ ಎರಡೂ ಸಭೆಗಳಲ್ಲಿ ಮರುಪರಿಶೀಲನಾ ಅರ್ಜಿ ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯ ವ್ಯಕ್ತವಾಗುವುದರ ಜೊತೆಗೆ ಇತರೆ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ,

ಒಂದು ಕಾಯಿದೆ ತರುವ ಬಗ್ಗೆ ಕೇಂದ್ರ ಸರ್ಕಾರದೊಂದಿಗೆ ಸಮಾಲೋಚಿಸುವುದು ಸೂಕ್ತವೆಂದು ಅಭಿಪ್ರಾಯ ವ್ಯಕ್ತವಾಗಿದೆ.

ಈ) ರಾಜ್ಯ ಸರ್ಕಾರವು ಈಗಾಗಲೇ ದಾಖಲಿಸಿರುವ ಮರು ಪರಿಶೀಲನಾ ಅರ್ಜಿಯ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನಾತ್ಮಕ ಪೀಠವು ನೀಡುವ ತೀರ್ಪನ್ನು ಅನುಸರಿಸಿ ಮುಂದಿನ ಕ್ರಮ ವಹಿಸಲಾಗುವುದು.

ಉ) ಈಗಾಗಲೇ ಸಲ್ಲಿಕೆಯಾಗಿರುವ ಮರು ಪರಿಶೀಲನಾ ಅರ್ಜಿಯ ಕುರಿತು ಸರ್ವೋಚ್ಚ ನ್ಯಾಯಾಲಯದ ಸಂವಿಧಾನಾತ್ಮಕ ಪೀಠದ ತೀರ್ಪು ಹೊರಬಿದ್ದ ನಂತರ ಪರ್ಯಾಯ ಮಾರ್ಗಗಳ ಬಗ್ಗೆ ಪರಿಶೀಲಿಸಲಾಗುವುದು.

ಪಠ್ಯ ಪುಸ್ತಕ ಅಕ್ರಮ ಮಾರಾಟ

1444(2328), ಡಾ: ಸುಧಾಕರ್ ಕೆ. (ಚಿಕ್ಕಬಳ್ಳಾಪುರ)

ಅ) ಪಿ.ಯು.ಸಿ. ಪಠ್ಯ ಪುಸ್ತಕಗಳ ಅಕ್ರಮ ಮಾರಾಟದ ಬಗ್ಗೆ ನಡೆಸಿದ ಇಲಾಖೆ ಮಟ್ಟದ ತನಿಖೆ ಪೂರ್ಣಗೊಂಡಿದೆಯೇ; (ವಿವರ ನೀಡುವುದು)

ಆ) ಟೆಂಡರ್ ಪ್ರಕ್ರಿಯೆಯಲ್ಲಿ ಆಗಿರುವ ಗೊಂದಲಗಳೇನು, ಈ ಸಮಸ್ಯೆಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

ಇ) ಪಠ್ಯ ಪುಸ್ತಕ ಮುದ್ರಣಕ್ಕೆ ಕರೆದಿರುವ ಟೆಂಡರ್ ಪ್ರಕ್ರಿಯೆಯ ವಿವರಗಳೇನು; ಆಯ್ಕೆಗೆ ಬಳಸಿದ ಮಾನದಂಡ ಏನು;

ಈ) ಪುಸ್ತಕ ಮುದ್ರಣಕ್ಕೆ ಪ್ರತಿ ವರ್ಷ ಎಷ್ಟು ಹಣ ವ್ಯಯ ಮಾಡಲಾಗುತ್ತಿದೆ, ಹಳೆ ಪಠ್ಯ ಪುಸ್ತಕಗಳ ಬಳಕೆಗೆ ಉತ್ತೇಜನ ನೀಡದೇ ಇರಲು ಕಾರಣವೇನು; ಪುಸ್ತಕಗಳ ಮರು ಬಳಕೆ